ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001**

**ಸಂಖ್ಯೆ: ಸಿ4[5]ಇತರೆ ಅನುಮತಿ /01/2018-19.** **ದಿನಾಂಕ:30/08/19**

ಸುತ್ತೋಲೆ

**ವಿಷಯ:** ಇಂಡಿಯನ್ ಆಯಿಲ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆಯ ವತಿಯಿಂದ ರಾಷ್ಟ್ರಮಟ್ಟದ ಸಕ್ಷಮ-2019 ಸ್ಪರ್ಧೆಯಲ್ಲಿ ಶಾಲಾ ಮಕ್ಕಳು ಭಾಗವಹಿಸುವ ಬಗ್ಗೆ.

**ಉಲ್ಲೇಖ:** 1.ಇಂಡಿಯನ್ ಆಯಿಲ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆಯ ಪತ್ರ ದಿನಾಂಕ:25/07/2019.

2.ಸರ್ಕಾರದ ಪ್ರಧಾನ ಕಾರ್ಯದರ್ಶಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇವರ ಆದೇಶ ದಿನಾಂಕ:30/07/2019.

&&&&&&&&&&&&

ಇಂಡಿಯನ್ ಆಯಿಲ್ ಕಾರ್ಪೋರೇಷನ್ ಲಿಮಿಟೆಡ್, BPCL/HPCL/GAIL/PCRA ಸಂಸ್ಥೆಯು ರಾಷ್ಟ್ರಮಟ್ಟದಲ್ಲಿ ಸಕ್ಷಮ-2019 ಕಾರ್ಯಕ್ರಮದಡಿಯಲ್ಲಿ ಶಾಲೆಗಳಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ಬಳಕೆ ಮತ್ತು ಸಂರಕ್ಷಣೆಯ ವಿಷಯವಾಗಿ ಚಿತ್ರಕಲೆ, ಪ್ರಬಂಧ ಮತ್ತು ರಸಪ್ರಶ್ನೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತಾರೆ.

ಈ ಸ್ಪರ್ಧೆಗಳಲ್ಲಿ ವಿಜೇತರಾಗುವ ಶಾಲಾಮಕ್ಕಳಿಗೆ ಲ್ಯಾಪ್‌ಟಾಪ್, ಆಕರ್ಷಕ ನಗದು ಬಹುಮಾನ ಮತ್ತು ವಿದೇಶ ಪ್ರವಾಸ ಹೋಗುವ ಅವಕಾಶಗಳನ್ನು ನೀಡಲಾಗಿದೆ. ಶಾಲೆಗಳು ಈ ಸ್ಪರ್ಧೆಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ www.pcracompetitions.org ಎಂಬ portal ಅನ್ನು ವಿನ್ಯಾಸಗೊಳಿಸಿದ್ದು, ಈ portal ನಲ್ಲಿ ಸ್ಪರ್ಧೆಗೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿಗಳನ್ನು ವಿವರಿಸಿದ್ದು, ಈ ಕಾರ್ಯಕ್ರಮಕ್ಕೆ ಶಾಲಾ ಮಕ್ಕಳು ಭಾಗವಹಿಸಲು ಸೂಚಿಸುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಉಲ್ಲೇಖ(2)ರಲ್ಲಿ ಸರ್ಕಾರವು ವ್ಯಾಪಕ ಪ್ರಚಾರ ನೀಡಿ ಹೆಚ್ಚಿನ ಶಾಲೆಗಳು ಭಾಗವಹಿಸಲು ಸೂಚಿಸಿರುತ್ತದೆ. ಆದ್ದರಿಂದ ಈ ಕಾರ್ಯಕ್ರಮಗಳ ಬಗ್ಗೆ, ನಿಮ್ಮ ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಹೆಚ್ಚು ವ್ಯಾಪಕ ಪ್ರಚಾರಗಳನ್ನು ನೀಡಿ. ಎಲ್ಲಾ ಶಾಲಾ ಮಕ್ಕಳು ಈ ಸ್ಪರ್ಧೆಗಳಲ್ಲಿ ಭಾಗವಹಿಸಿ ಅದರ ಅನುಕೂಲಗಳನ್ನು ಪಡೆದುಕೊಳ್ಳುವಂತೆ ಸೂಚಿಸಲು ತಮಗೆ ತಿಳಿಸಿದೆ.

ಎಲ್ಲಾ ಶಾಲೆಗಳ ಮುಖ್ಯಸ್ಥರು ಈ ಕಾರ್ಯಕ್ರಮದ ಬಗ್ಗೆ ಗಮನಹರಿಸಿ ನೀಡಿರುವ portal ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ದಾಖಲುಮಾಡಿ , ಪೆಟ್ರೋಲಿಯಂ ಉತ್ಪನ್ನಗಳ ಬಳಕೆ ಮತ್ತು ಸಂರಕ್ಷಣೆಯ ವಿಷಯವಾಗಿ ಚಿತ್ರಕಲೆ, ಪ್ರಬಂಧ ಮತ್ತು ರಸಪ್ರಶ್ನೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡು. ಪ್ರತಿ ವಿಭಾಗದಲ್ಲಿ ಆಯ್ಕೆಯಾದ ಇಬ್ಬರು ವಿದ್ಯಾರ್ಥಿಗಳ ಮಾಹಿತಿಯನ್ನು www.pcracompetitions.org ಎಂಬ portal ನಲ್ಲಿ ನಮೂದಿಸಲು ತಿಳಿಸಿದೆ.(ಸಹಾಯವಾಣಿಸಂಖ್ಯೆ:9972826827/011-26715360)

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

ನಿರ್ದೇಶಕರು [ಪ್ರೌಢ ಶಿಕ್ಷಣ]
ಸಾ.ಶಿ.ಇ ಬೆಂಗಳೂರು-01

**ರವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು/ಬ್ಲಾಕ್‌ಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತುರ್ತು ಕ್ರಮಕ್ಕಾಗಿ
3. ಎಲ್ಲಾ ಶಾಲೆಗಳ ಮುಖ್ಯೋಪಾಧ್ಯಾಯರುಗಳು ಹೆಚ್ಚಿನ ಮಕ್ಕಳು ಈ ಸ್ಪರ್ಧೆಯಲ್ಲಿ ಭಾಗವಹಿಸಲು ಅಗತ್ಯ ಕ್ರಮಕ್ಕಾಗಿ.